RNU AIR DHARWAD

FEBRUARY 27, 2025

**AKASHAVANI - DHARWAD**

**PRADESH SAMACHARA (KANNADA) 07.05**

<><><>

**ಮುಖ್ಯಾಂಶಗಳು:**

- **ಇಂದಿನಿಂದ ಬೆಂಗಳೂರಿನ ವಿಧಾನಸೌಧ ಆವರಣದಲ್ಲಿ ಬೃಹತ್ ಪುಸ್ತಕ ಮೇಳ ಆಯೋಜನೆ.**

- **ರಾಜ್ಯದ 11 ಸಾವಿರ ಕೋಟಿ ರೂಪಾಯಿ ಮೊತ್ತದ ನೀರಾವರಿ ಯೋಜನೆಗಳ ಬಗ್ಗೆ ಕೇಂದ್ರ ಜಲಶಕ್ತಿ ಸಚಿವರಲ್ಲಿ ಪ್ರಸ್ತಾವನೆ – ಉಪಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್**

- **ಅನ್ನಭಾಗ್ಯ ಯೋಜನೆಯಲ್ಲಿ ಫಲಾನುಭವಿಗಳಿಗೆ ಮುಂದಿನ ತಿಂಗಳಿನಿಂದ 10 ಕೆಜಿ ಅಕ್ಕಿ ನೀಡಲಾಗುವುದು– ಸಚಿವ ಕೆ. ಎಚ್. ಮುನಿಯಪ್ಪ.**

- **ರಾಜ್ಯಾದ್ಯಂತ ನಾಳೆ, ರಾಷ್ಟ್ರೀಯ ವಿಜ್ಞಾನ ದಿನ ಪ್ರತಿಜ್ಞಾವಿಧಿ ಸ್ವೀಕಾರಕ್ಕೆ ಸರ್ಕಾರದ ನಿರ್ಧಾರ.**

<><><>

**ವಾರ್ತೆಗಳ ವಿವರ...**

<><><>

**ಇಂದು ಸಂಜೆಯಿಂದ ಮಾರ್ಚ್ 3ರ ವರೆಗೆ ಬೆಂಗಳೂರಿನ** ವಿಧಾನಸೌಧ ಆವರಣದಲ್ಲಿ ಪುಸ್ತಕ ಮೇಳ ಆಯೋಜಿಸಲಾಗುತ್ತಿದ್ದು, 175 ಪುಸ್ತಕ ಮಳಿಗೆಗಳಿಗೆ ಅವಕಾಶ ಕಲ್ಪಿಸಲಾಗುತ್ತಿದೆ. ವಿಧಾನಸೌಧದ ಎಲ್ಲಾ ಗೇಟ್‌ಗಳಿಂದ ಮುಕ್ತ ಪ್ರವೇಶ ಕಲ್ಪಿಸಲಾಗಿದೆ. ಮೇಳದಲ್ಲಿ ಪುಸ್ತಕಗಳ ಬಿಡುಗಡೆ, ಚರ್ಚೆ, ಸಂವಾದ ಕಾರ್ಯಕ್ರಮಗಳು ನಡೆಯಲಿವೆ. ಶಾಸಕರು ತಮ್ಮ ನಿಧಿಯಿಂದ 2 ರಿಂದ 3 ಲಕ್ಷ ರೂಪಾಯಿಗಳವರೆಗೆ ಪುಸ್ತಕಗಳನ್ನು ಖರೀದಿಸಿ ತಮ್ಮ ಕ್ಷೇತ್ರದ ಸಾರ್ವಜನಿಕ ಗ್ರಂಥಾಲಯ ಹಾಗೂ ಶಾಲೆಗಳಿಗೆ ಪೂರೈಸಲು ಅವಕಾಶವಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಸಂಜೆ ಬೃಹತ್ ಪುಸ್ತಕ ಮೇಳವನ್ನು ಉದ್ಘಾಟಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಅನೇಕ ಬರಹಗಾರರು ತಮ್ಮ ಕೃತಿಗಳನ್ನು ಬಿಡುಗಡೆ ಮಾಡಲಿದ್ದಾರೆ. ಮಕ್ಕಳ ಸಾಹಿತ್ಯ, ಸಿನಿಮಾ, ಸಂವಿಧಾನ ಮತ್ತು ಕನ್ನಡ ಸಾಹಿತ್ಯದಂತಹ ವಿಷಯಗಳ ಕುರಿತು ಬರಹಗಾರರು ಮತ್ತು ತಜ್ಞರೊಂದಿಗೆ ಪ್ರತಿದಿನ ಸಂವಾದ ನಡೆಯಲಿದೆ.

<><><>

**ರಾಜ್ಯ ಸರ್ಕಾರದ ಪಂಚಖಾತ್ರಿ ಯೋಜನೆಗಳಲ್ಲಿ ಒಂದಾದ ‘ಶಕ್ತಿ ಯೋಜನೆಯಡಿ’** ನಾಡಿನ ಹೆಣ್ಣುಮಕ್ಕಳು ಸಾರಿಗೆ ಬಸ್‌ಗಳಲ್ಲಿ 400 ಕೋಟಿ ಬಾರಿ ಉಚಿತ ಪ್ರಯಾಣ ಬೆಳೆಸಿದ್ದಾರೆ. ಶಿಕ್ಷಣ, ಉದ್ಯೋಗ ಮುಂತಾದ ಉದ್ದೇಶಗಳಿಗಾಗಿ ನಿತ್ಯ ಪ್ರಯಾಣ ಬೆಳೆಸುವ ಹೆಣ್ಣುಮಕ್ಕಳಿಗೆ ಈ ಯೋಜನೆ ವರದಾನವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ‘ಶಕ್ತಿ ಯೋಜನೆ’ ಜಾರಿಗೊಂಡ ನಂತರದಿಂದ, ಈವರೆಗಿನ ಒಟ್ಟು ಟಿಕೆಟ್ ಮೌಲ್ಯ 9 ಸಾವಿರದ 803 ಕೋಟಿ ರೂಪಾಯಿ ಆಗಿದ್ದು, ಮಹಿಳಾ ಸಬಲೀಕರಣದ ನಿಟ್ಟಿನಲ್ಲಿ ಶಕ್ತಿ ನವ ಇತಿಹಾಸ ಸೃಷ್ಟಿಸಿದೆ. ಪ್ರಯಾಣಿಕರ ಸಂಖ್ಯೆಯೂ ಹೆಚ್ಚಾಗಿರುವ ಹಿನ್ನೆಲೆ ಹೆಚ್ಚುವರಿ ಬಸ್‌ಗಳನ್ನು ಖರೀದಿಸಲಾಗಿದೆ. ಈ ಮೂಲಕ ಉದ್ಯೋಗ ಸೃಷ್ಟಿಯು ಹೆಚ್ಚಾಗಿದೆ. ಈಗಾಗಲೇ ಸಾರಿಗೆ ಸಂಸ್ಥೆಗಳಲ್ಲಿನ 9,000 ಹುದ್ದೆಗಳ ನೇಮಕಾತಿಗೆ ಅನುಮತಿ ನೀಡುವುದರ ಜೊತೆಗೆ 2,000 ಚಾಲಕ ಕಂ ನಿರ್ವಾಹಕರು ಹಾಗೂ 300 ತಾಂತ್ರಿಕ ಸಿಬ್ಬಂದಿಗಳ ನೇಮಕಾತಿಗೆ ಆದೇಶಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ತಿಳಿಸಿದ್ದಾರೆ.

<><><>

**ರಾಜ್ಯದ 11 ಸಾವಿರ ಕೋಟಿ ರೂಪಾಯಿ ಮೊತ್ತದ ನೀರಾವರಿ ಯೋಜನೆಗಳ ಬಗ್ಗೆ** ಕೇಂದ್ರ ಜಲಶಕ್ತಿ ಸಚಿವರ ಬಳಿ ಪ್ರಸ್ತಾವನೆ ಮಂಡಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೇಕೆದಾಟು ಯೋಜನೆ ವಿಚಾರದಲ್ಲಿ ಕೇಂದ್ರ ಸರ್ಕಾರದ ನಿಲುವು ಸ್ಪಷ್ಟಪಡಿಸುವಂತೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಹೇಳಿದ್ದಾರೆ. ತುಂಗಭದ್ರಾ ಅಣೆಕಟ್ಟಿನಲ್ಲಿ ಹೂಳು ತುಂಬಿಕೊಂಡಿರುವ ಹಿನ್ನೆಲೆ ಸುಮಾರು 30 ಟಿಎಂಸಿ ನೀರು ನಷ್ಟವಾಗುತ್ತಿದ್ದು, ನವಲಿ ಬಳಿ ಸಮಾನಾಂತರ ಅಣೆಕಟ್ಟು ನಿರ್ಮಾಣ ಮಾಡುವ ಯೋಜನೆ ಇದೆ. ಆಂಧ್ರಪ್ರದೇಶ ಹಾಗೂ ತೆಲಂಗಾಣ ಸಚಿವರು ಹಾಗೂ ಅಧಿಕಾರಿಗಳ ಜೊತೆ ಈ ಕುರಿತಂತೆ ಪ್ರತ್ಯೇಕ ಸಭೆ ನಡೆಸಲಾಗಿದೆ ಎಂದು ತಿಳಿಸಿದ್ದಾರೆ. ನವಲಿ ಅಣೆಕಟ್ಟು ವಿಚಾರವಾಗಿ ಆಂಧ್ರಪ್ರದೇಶ ಮುಖ್ಯಮಂತ್ರಿ ಜೊತೆ ಮಾರ್ಚ್ ಮೊದಲ ವಾರದಲ್ಲಿ ಮತ್ತೊಮ್ಮೆ ಚರ್ಚಿಸಲಾಗುವುದು ಎಂದು ಹೇಳಿದ್ದಾರೆ. ಇದೇ ವೇಳೆ, ತೆಲಂಗಾಣಕ್ಕೆ ನಾರಾಯಣಪುರ ಜಲಾಶಯದಿಂದ ಒಂದು ಟಿಎಂಸಿ ನೀರು ಬಿಟ್ಟಿರುವ ಬಗ್ಗೆ ಉಪಮುಖ್ಯಮಂತ್ರಿ ಸಮರ್ಥಿಸಿಕೊಂಡಿದ್ದಾರೆ. ರಾಜ್ಯಕ್ಕೆ ಅವಶ್ಯಕತೆ ಇದ್ದಾಗ ತೆಲಂಗಾಣ ಸರ್ಕಾರದಿಂದಲೂ ಸಹಾಯವಾಗಿದೆ ಎಂದು ತಿಳಿಸಿದ್ದಾರೆ.

<><><>

**ಮುಂಬರುವ ಬೇಸಿಗೆಯಲ್ಲಿ ಕಲಬುರಗಿ ಜಿಲ್ಲೆಯಲ್ಲಿ ಕುಡಿಯುವ ನೀರು** ಮತ್ತು ಜಾನುವಾರುಗಳ ಮೇವಿನ ಕೊರತೆ ಎದುರಾಗದಂತೆ ನೋಡಿಕೊಳ್ಳುವುದು ನಮ್ಮ ಆದ್ಯತೆಯ ವಿಷಯವಾಗಿದೆ ಎಂದು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಈ ಕುರಿತು ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಪ್ರತಿ ವರ್ಷ ಬೇಸಿಗೆಯಲ್ಲಿ ಜಿಲ್ಲೆಯಾದ್ಯಂತ ನಗರ–ಪಟ್ಟಣ ಹಾಗೂ ಗ್ರಾಮೀಣ ಭಾಗದಲ್ಲಿ ಕಂಡುಬರುವ ಸಂಭಾವ್ಯ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ದೊರಕಿಸಲು, ತಾಲೂಕುವಾರು ಸಭೆ ನಡೆಸಿ ಸಮಗ್ರ ಕ್ರಿಯಾ ಯೋಜನೆ ರೂಪಿಸಿ ಸಲ್ಲಿಸಬೇಕು ಎಂದು ಸೂಚಿಸಿದರು.

<><><>

**ಬೆಂಗಳೂರಿನಲ್ಲಿ ಇಂದಿನಿಂದ ಮೂರು ದಿನಗಳ ಕಾಲ, ‘ಗೆಫೆಕ್ಸ್ ಶೃಂಗ ಸಭೆ’** ಆಯೋಜಿತವಾಗಿದೆ. ಮಾಧ್ಯಮ ಹಾಗೂ ಮನೋರಂಜನೆಯ ಕ್ಷೇತ್ರದಲ್ಲಿ, ಭಾರತ ಜಾಗತಿಕ ನಾಯಕತ್ವ ವಹಿಸುವುದರ ಹಿಂದಿನ, ಚಾಲಕ ಶಕ್ತಿಯಾಗಿ ಬೆಂಗಳೂರಿನ ಶೃಂಗ ಸಭೆ, ದಿಕ್ಸೂಚಿಯಾಗಲಿದೆ ಎಂದಿದ್ದಾರೆ. 20 ಸಾವಿರಕ್ಕೂ ಹೆಚ್ಚು ತಂತ್ರಜ್ಞರು ಭಾಗವಹಿಸುವ ನಿರೀಕ್ಷೆ ಇದೆ.

<><><>

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

<><><>

**ಅನ್ನಭಾಗ್ಯ ಯೋಜನೆಯಲ್ಲಿ ಫಲಾನುಭವಿಗಳ ಖಾತೆಗೆ ನೇರವಾಗಿ ಹಣ** ವರ್ಗಾವಣೆ ಮಾಡಲಾಗುತ್ತಿತ್ತು, ಮುಂದಿನ ತಿಂಗಳಿನಿಂದ 10 ಕೆಜಿ ಅಕ್ಕಿಯನ್ನು ನೀಡಲಾಗುವುದು. ಇದರಿಂದ ರಾಜ್ಯದ 4.5 ಕೋಟಿ ಜನರಿಗೆ ಅನುಕೂಲವಾಗಲಿದ್ದು, ನಾವು ನುಡಿದಂತೆ ನಡೆದಿದ್ದೇವೆ ಎಂದು ಆಹಾರ ಮತ್ತು ನಾಗರಿಕ ಪೂರೈಕೆ ಖಾತೆ ಸಚಿವ ಕೆ. ಹೆಚ್. ಮುನಿಯಪ್ಪ ತಿಳಿಸಿದ್ದಾರೆ. ಕೋಲಾರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು; ಈ ಬಾರಿ ಬಜೆಟ್ ನಲ್ಲಿ ಜಿಲ್ಲೆಯ ಅಗತ್ಯಗಳ ಬಗ್ಗೆ ಜಿಲ್ಲಾ

ಉಸ್ತುವಾರಿ ಸಚಿವರು, ಶಾಸಕರು ಸಲಹೆಗಳನ್ನು ನೀಡಿದ್ದಾರೆ, ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಗುರುತರವಾದ ಕೆಲಸಗಳಾಗಬೇಕಿದ್ದು, ಆ ಬಗ್ಗೆ ಮುಖ್ಯಮಂತ್ರಿಗಳ ಗಮನಕ್ಕೆ ತಂದಿದ್ದೇವೆ ಎಂದರು.

<><><>

**ಶಾಂತಿ ಹಾಗೂ ಸಹೋದರತ್ವವನ್ನು ಸಮಾಜದಲ್ಲಿ ಸಾರುವ ಹಿನ್ನೆಲೆಯಲ್ಲಿ** ವೈಜ್ಞಾನಿಕ ಮನೋಭಾವನೆಯನ್ನು ನಾಗರಿಕರಲ್ಲಿ ಬೆಳೆಸುವುದು ಪ್ರಸ್ತುತ ಕಾಲಘಟ್ಟದಲ್ಲಿ ಅವಶ್ಯವಾಗಿದ್ದು, ಇದು ಸಂವಿಧಾನದ ಮೂಲಭೂತ ಕರ್ತವ್ಯಗಳಲ್ಲಿ ಒಂದಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಈ ನಿಟ್ಟಿನಲ್ಲಿ ಫೆಬ್ರವರಿ 28 ರಂದು ರಾಷ್ಟ್ರೀಯ ವಿಜ್ಞಾನ ದಿನಾಚರಣೆಯ ಸಂದರ್ಭದಲ್ಲಿ ರಾಜ್ಯದ ಎಲ್ಲಾ ಶಾಲಾ–ಕಾಲೇಜುಗಳು ಹಾಗೂ ಸರ್ಕಾರಿ ಕಚೇರಿಗಳಲ್ಲಿ ಏಕಕಾಲದಲ್ಲಿ ವೈಜ್ಞಾನಿಕ ಮನೋಭಾವನೆ ಹಾಗೂ ಮಾನವೀಯ ಮೌಲ್ಯಗಳನ್ನು ಮೈಗೂಡಿಸಿಕೊಳ್ಳುವಂತೆ ಪ್ರತಿಜ್ಞಾವಿಧಿ ಸ್ವೀಕರಿಸಿ, ಮೂಲಭೂತ ಕರ್ತವ್ಯಗಳನ್ನು ಪಾಲಿಸುವ ಮೂಲಕ ರಾಷ್ಟ್ರೀಯ ವಿಜ್ಞಾನ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದು ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ತಿಳಿಸಿದ್ದಾರೆ. ಆದ್ದರಿಂದ ಎಲ್ಲಾ ಶಾಲಾ–ಕಾಲೇಜು ಹಾಗೂ ಸರ್ಕಾರಿ ಕಚೇರಿಗಳಲ್ಲಿ ಈ ಪ್ರತಿಜ್ಞಾ ವಿಧಿಯನ್ನು ನಾಳೆ ಪೂರ್ವಾಹ್ನ 10.30 ಕ್ಕೆ ರಾಜಾದ್ಯಂತ ಏಕಕಾಲಕ್ಕೆ ಸ್ವೀಕರಿಸುವಂತೆ ಕೋರಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

<><><>

**ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿ ಪರೀಕ್ಷೆಗಳಿಗೆ** ಜಿಲ್ಲಾಡಳಿತದಿಂದ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ. ಎಸ್.ಎಸ್.ಎಲ್.ಸಿ ಫಲಿತಾಂಶ ಸುಧಾರಣೆಗೆ ಮಿ ʼನ್ ವಿದ್ಯಾಕಾಶಿ ಕಾರ್ಯಕ್ರಮದಡಿಯಲ್ಲಿ ಹಲವಾರು ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಧಾರವಾಡ ಜಿಲ್ಲಾಧಿಕಾರಿ ದಿವ್ಯಾ ಪ್ರಭು ಹೇಳಿದರು. ಪಿಯುಸಿ ಪರೀಕ್ಷೆಯಲ್ಲಿ ಪಾರದರ್ಶಕತೆ ಕಾಪಾಡಲು ಪ್ರಶ್ನೆ ಪತ್ರಿಕೆ ವಿತರಣಾ ಕೇಂದ್ರಗಳಲ್ಲಿ ಬಯೋಮೆಟ್ರಿಕ್ ವ್ಯವಸ್ಥೆ ಕಲ್ಪಿಸಲಾಗಿದ್ದು, ರೂಟ್ ಆಫೀಸರ್ಸ್ ನೇಮಿಸಲಾಗಿದೆ. ಪ್ರಶ್ನೆ ಪತ್ರಿಕೆ ಕೊಂಡೊಯ್ಯುವ ವಾಹನಗಳಿಗೆ ಜಿಪಿಎಸ್ ಅಳವಡಿಕೆ ಮಾಡಲಾಗಿದ್ದು, ಅಗತ್ಯವಿರುವೆಡೆ ಸಿಸಿಟಿವಿ ಅಳವಡಿಸಲಾಗಿದೆ ಎಂದರು. ಹುಬ್ಬಳ್ಳಿಯಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಅವರು ಮಾತನಾಡಿದರು.

<><><>

**ಬೈಟ್: ದಿವ್ಯಾ ಪ್ರಭು 46 ಸೆಕೆಂದುಗಳು**

<><><>

**ಮಹಾ ಶಿವರಾತ್ರಿ ಪರ್ವವನ್ನು ನಿನ್ನೆ ನಾಡಿನ ಶಿವ ದೇಗುಲಗಳಲ್ಲಿ ಅಹೋರಾತ್ರಿ** ಪಾರಾಯಣ, ಭಜನೆ ಜೊತೆಗೆ ಉಪವಾಸ ವ್ರತಾಚರಣೆ ಮೂಲಕ ಶ್ರದ್ಧಾ ಭಕ್ತಿಗಳಿಂದ ಆಚರಿಸಲಾಯಿತು. ರಾಜ್ಯದ ವಿವಿಧೆಡೆ ಮಹಾ ಶಿವರಾತ್ರಿಯ ಅಂಗವಾಗಿ ದೇವಾಲಯಗಳಲ್ಲಿ ವಿಶೇಷ ಪೂಜೆ ನಡೆಯಿತು

<><><>

**ಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ವಿರುದ್ಧ** ವಿಚಾರಣೆಗೆ ಅನುಮತಿ ನೀಡುವಂತೆ ಲೋಕಾಯುಕ್ತ ವಿಶೇ ʼ ತನಿಖಾ ತಂಡ ರಾಜ್ಯಪಾಲರ ಅನುಮತಿ ಕೇಳಿದೆ ಎಂದು ಸುದ್ದಿ ಸಂಸ್ಥೆ ವರದಿ ಮಾಡಿದೆ. ಕುಮಾರಸ್ವಾಮಿ ಅವರು 2006 ರಿಂದ 2008 ರವರೆಗೆ ಮುಖ್ಯಮಂತ್ರಿ ಆಗಿದ್ದ ಅವಧಿಯಲ್ಲಿ ಬಳ್ಳಾರಿ ಜಿಲ್ಲೆಯ ಸಂಡೂರು ತಾಲೂಕಿನ ಖಾಸಗಿ ಕಂಪನಿಗೆ 550 ಎಕರೆ ಗಣಿಗಾರಿಕೆ ಗುತ್ತಿಗೆಯನ್ನು ಕಾನೂನುಬಾಹಿರವಾಗಿ ಅನುಮೋದಿಸಿದ್ದಾರೆ ಎಂಬ ಆರೋಪ ಕೇಳಿ ಬಂದಿತ್ತು.

<><><>

**ಈಗ ಸಂಕ್ಷಿಪ್ತ ಸುದ್ದಿ**

<><><>

**ಕರ್ನಾಟಕದ ಮೂರು ಜಿಲ್ಲೆಗಳಿಗೆ ಉ ್ಣ ಅಲೆಯ ಎಚ್ಚರಿಕೆಯನ್ನು ಹವಾಮಾನ** ಇಲಾಖೆ ನೀಡಿದೆ. ಉತ್ತರ ಕನ್ನಡ, ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿ ಬಿಸಿಲ ಝಳ ಹೆಚ್ಚಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><><>

**ವಿಜಯನಗರದಲ್ಲಿ ಇದೇ 28 ರಂದು ಹಂಪಿ ಉತ್ಸವ ನಡೆಯಲಿದ್ದು, ಸಿದ್ಧತೆ** ಪೂರ್ಣಗೊಂಡಿದೆ. ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹ್ಮದ್ ಖಾನ್ ಹಂಪಿಯ ಮುಖ್ಯ ವೇದಿಕೆಯ ಸಿದ್ಧತೆ ಪರಿಶೀಲಿಸಿದರು. ಮುಖ್ಯ ವೇದಿಕೆ ಕಮಲ್ ಮಹಲ್ ಮತ್ತು ವಿಜಯ ವಿಠಲ ದೇವಸ್ಥಾನದ ಮಾದರಿಯನ್ನು ಒಳಗೊಂಡಿದೆ.

<><><>

**ರಾಜ್ಯ ಗುತ್ತಿಗೆ ಶುಶ್ರೂಶಾಧಿಕಾರಿಗಳ ಸಂಘಟನೆ ವಿವಿಧ ಬೇಡಿಕೆ ಈಡೇರಿಕೆಗಾಗಿ** ಬೆಂಗಳೂರಿನಲ್ಲಿ ಅನಿರ್ದಿಷ್ಟಾವಧಿವರೆಗೆ ಅಹೋರಾತ್ರಿ ಧರಣಿ ಹಮ್ಮಿಕೊಂಡಿದೆ. ಸ್ಥಳಕ್ಕೆ ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಸಂಸದ ಡಾಕ್ಟರ್ ಸಿ.ಎನ್.ಮಂಜುನಾಥ ಸೇರಿದಂತೆ ರಾಜ್ಯ ಗುತ್ತಿಗೆ ಶುಶ್ರೂಶಾಧಿಕಾರಿ ಸಂಘದ ಪದಾಧಿಕಾರಿಗಳು, ಹಲವರು ಪಾಲ್ಗೊಂಡಿದ್ದರು. **ಬಳಿಕ ಛಲವಾದಿ ನಾರಾಯಣಸ್ವಾಮಿ,** ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಹೋರಾಟಕ್ಕೆ ಬೆಲೆ ನೀಡುವುದು ಅವಶ್ಯ. ಪರಿಶಿಷ್ಟ ಸಮುದಾಯಕ್ಕೆ ನೀಡಿದ್ದ ಅನುದಾನವನ್ನು ಖಾತ್ರಿ ಯೋಜನೆಗಳಿಗೆ ರಾಜ್ಯ ಸರ್ಕಾರ ಬಳಸಿಕೊಂಡಿದೆ. ಎಸ್.ಸಿ.ಪಿ/ಟಿ.ಎಸ್.ಪಿ. ಅನುದಾನವನ್ನು ದುರ್ಬಳಕೆ ಮಾಡಿಕೊಳ್ಳಲಾಗಿದೆ ಎಂದರು.

<><><><><><><><><>